# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತೆಂಟನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ:04ನೇ ಫೆಬ್ರವರಿ, 2026**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

****

## 01. ನಿಯಮ 330ಎರ ಮೇರೆಗೆ

## 02. ಅಧಿಕೃತ ನಿರ್ಣಯ

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು:-**

ಕೇಂದ್ರ ಸರ್ಕಾರದ ವಿಕಸಿತ ಭಾರತ ಗ್ಯಾರೆಂಟಿ ಫಾರ್ ರೋಜ್‌ಗಾರ್ ಮತ್ತು ಅಜೀವಿಕ ಮಿಷನ್ (ಗ್ರಾಮೀಣ) (VB-G RAM G) ಕಾಯ್ದೆಯನ್ನು ರದ್ದುಪಡಿಸುವ ಹಾಗೂ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ (MGNREGA) ಕಾಯ್ದೆಯನ್ನು ಮರುಸ್ಥಾಪಿಸಬೇಕೆಂದು ಕೇಂದ್ರ ಸರ್ಕಾರವನ್ನು ಈ ಸದನವು ಸರ್ವಾನುಮತದಿಂದ ಒತ್ತಾಯಿಸುತ್ತದೆ.

## 03. ಗಮನ ಸೆಳೆಯುವ ಸೂಚನೆಗಳು

01. **ಶ್ರೀಯುತರುಗಳಾದ ಮಂಜುನಾಥ್ ಭಂಡಾರಿ, ಎಸ್. ರವಿ ಹಾಗೂ ಎಂ.ಎಲ್. ಅನಿಲ್ ಕುಮಾರ್** ಅವರುಗಳು ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿ ನೇಮಕ ಆದೇಶವನ್ನು ಹಿಂಪಡೆದು, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ, 1993ರ ಪ್ರಕರಣ 8(1)ಬಿ (i) ರನ್ವಯ ಈಗಿರುವ ಸದಸ್ಯರನ್ನೊಳಗೊಂಡ ಆಡಳಿತ ಸಮಿತಿಯ ಅವಧಿಯನ್ನು 6 ತಿಂಗಳಿಗೆ ವಿಸ್ತರಿಸುವ ಬಗ್ಗೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರ ಗಮನ ಸೆಳೆಯುವುದು.

02. **ಶ್ರೀ ಬಸನಗೌಡ ಬಾದರ್ಲಿ** ಅವರು ಹಟ್ಟಿ ಚಿನ್ನದ ಗಣಿ ಕಂಪನಿಯು ತನ್ನ ಅವೈಜ್ಞಾನಿಕ ಉತ್ಪಾದನೆಯಿಂದಾಗಿ ಡಿಸೆಂಬರ್-2025 ಅಂತ್ಯಕ್ಕೆ ನಿಗದಿತ ಗುರಿಗಿಂತ ಸುಮಾರು 285 ಕೆ.ಜಿ. ಕಡಿಮೆ ಚಿನ್ನವನ್ನು ಹಾಗೂ ಸುಮಾರು 1.31 ಲಕ್ಷ ಟನ್ ಕಡಿಮೆ ಅದಿರನ್ನು ಉತ್ಪಾದಿಸಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನ ಸೆಳೆಯುವುದು.

..2..

03. **ಶ್ರೀ ಶಾಂತಾರಾಮ್ ಬುಡ್ನ** ಸಿದ್ದಿ ಅವರು ಕುದುರೆ ಮುಖ ರಾಷ್ಟ್ರೀಯ ಉದ್ಯಾನವನ ವ್ಯಾಪ್ತಿಯಲ್ಲಿ ಬರುವ ಬುಡಕಟ್ಟು ಮತ್ತು ಇತರೆ ಜನಾಂಗದ ಕುಟುಂಬಗಳನ್ನು ಬೇರೆಡೆ ಸ್ಥಳಾಂತರಿಸುವುದರಿಂದ, ಕುಟುಂಬಗಳಿಗೆ ನೀಡುವ ಪರ್ಯಾಯ ಜಮೀನು ಅಥವಾ ಪರಿಹಾರ ಮತ್ತು ಸಾಗುವಳಿ ಮಾಡಿಕೊಂಡು ಬಂದ ಅರಣ್ಯ ಭೂಮಿಗೆ ಪರಿಹಾರ ಒದಗಿಸುವ ಬಗ್ಗೆ ಮಾನ್ಯ ಅರಣ್ಯ, ಜೀವಿಪರಿಸ್ಥಿತಿ ಮತ್ತು ಪರಿಸರ ಸಚಿವರ ಗಮನ ಸೆಳೆಯುವುದು.

04. **ಶ್ರೀ ನಿರಾಣಿ ಹಣಮಂತ್ ರುದ್ರಪ್ಪ** ಅವರು ಬಾಗಲಕೋಟಿ ಜಿಲ್ಲೆಯ ಜಮಖಂಡಿ ತಾಲ್ಲೂಕಿನಲ್ಲಿ ಕೃಷ್ಣ ನದಿಗೆ ಅಡ್ಡಲಾಗಿ ನಿರ್ಮಿಸಿರುವ ಹಿಪ್ಪರಗಿ ಬ್ಯಾರೇಜ್ ಗೇಟ್ ದುರಸ್ಥಿಗೊಳಿಸುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

05. **ಶ್ರೀಮತಿ ಬಲ್ಕೀಸ್ ಬಾನು** ಅವರು ಶಿವಮೊಗ್ಗ ತಾಲ್ಲೂಕು ನಿಧಿಗೆ ಹೋಬಳಿ ಊರಗಡೂರು ಗ್ರಾಮದ ಸರ್ವೆ ನಂ.37/1ರಲ್ಲಿರುವ 5 ಎಕರೆ 3 ಗುಂಟೆ ಇನಾಂ ಜಮೀನನ್ನು ನಿಯಮ ಬಾಹಿರವಾಗಿ ಭೂಸ್ವಾಧೀನ ಪಡಿಸಿಕೊಂಡಿದ್ದು, ಸದರಿ ಜಮೀನನ್ನು ಸರ್ಕಾರದ ವಶಕ್ಕೆ ಪಡೆಯುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

06. **ಶ್ರೀ ಎಸ್.ಎಲ್. ಭೋಜೇಗೌಡ** ಅವರು ಶಾಲಾ ಶಿಕ್ಷಣ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕೇತರ ನೌಕರರಿಗೆ ಆಡಳಿತಾತ್ಮಕ ಕಾರ್ಯಕ್ಷಮತೆಯನ್ನು ಹೆಚ್ಚಿಸಲು ಅಗತ್ಯವಿರುವ ಸೂಕ್ತ ತರಬೇತಿಯನ್ನು ಕಾಲಕಾಲಕ್ಕೆ ನೀಡುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

07. **ಡಾ: ಧನಂಜಯ ಸರ್ಜಿ** ಅವರು ರಾಜ್ಯದಲ್ಲಿ ಕುಡಿಯುವ ನೀರು ಸರಬರಾಜುಗಳಲ್ಲಿನ ಅಸಮರ್ಪಕ ಹಾಗೂ ಅವೈಜ್ಞಾನಿಕ ನಿರ್ವಹಣೆಯಿಂದಾಗಿ ರೋಗಗಳು ಹೆಚ್ಚಾಗುತ್ತಿರುವುದರಿಂದ ಇದನ್ನು ತಡೆಗಟ್ಟಲು "Water Quality Moinitoring and Public Wealth Protection Programme"ನ್ನು ಜಾರಿಗೆ ತರುವ ಬಗ್ಗೆ ಮಾನ್ಯ ಉಪ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

08. **ಶ್ರೀ ಶಿವಕುಮಾರ್ ಕೆ.** ಅವರು ಮೈಸೂರು ಜಿಲ್ಲೆಯ ಕಣಗಾಲ್ ಗ್ರಾಮದಲ್ಲಿರುವ 'ಚಿತ್ರಬ್ರಹ್ಮ' ಪುಟ್ಟಣ್ಣ ಕಣಗಾಲ್ ಅವರ ಜನ್ಮಸ್ಥಳವನ್ನು ಸಂರಕ್ಷಿಸಿ, ಅಲ್ಲಿ ಸ್ಮಾರಕ ಹಾಗೂ ಮ್ಯೂಸಿಯಂ ಸೇರಿದಂತೆ ಗ್ರಾಮದ ಸಮಗ್ರ ಅಭಿವೃದ್ಧಿಯೊಂದಿಗೆ 'ಸಾಂಸ್ಕೃತಿಕ ಪ್ರವಾಸಿ ತಾಣ'ವನ್ನಾಗಿ ರೂಪಿಸುವ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳ ಗಮನ ಸೆಳೆಯುವುದು.

09. **ಶ್ರೀಮತಿ ಹೇಮಲತಾ ನಾಯಕ** ಅವರು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಮುಚ್ಚಲ್ಪಟ್ಟಿರುವ ಗೋ-ಶಾಲೆಗಳನ್ನು ಮರುಸ್ಥಾಪಿಸುವ ಬಗ್ಗೆ ಮಾನ್ಯ ಪಶುಸಂಗೋಪನೆ ಮತ್ತು ರೇಷ್ಮೆ ಸಚಿವರ ಗಮನ ಸೆಳೆಯುವುದು.

## 04. ನಿಯಮ 330ರ ಮೇರೆಗೆ

01. **ಶ್ರೀಮತಿ ಭಾರತಿ ಶೆಟ್ಟಿ** ಅವರು ರಾಜ್ಯದಲ್ಲಿ ಮಂಗಳಮುಖಿಯರು ಸಮಾಜದ ಮುಖ್ಯ ವಾಹಿನಿಯಲ್ಲಿ ಶೋಷಣೆಗಳಿಗೆ ಒಳಪಡುತ್ತಿರುವುದರಿಂದ ಅವರ ಬದುಕನ್ನು ಸರ್ವಾಂಗೀಣವಾಗಿ ಅಭಿವೃದ್ಧಿಪಡಿಸಲು ಮತ್ತು ಸದರಿಯವರ ಮೇಲೆ ನಡೆಯುತ್ತಿರುವ ಶೋಷಣೆಯನ್ನು ತಪ್ಪಿಸಲು ಪ್ರತ್ಯೇಕ ನಿರ್ದೇಶನಾಲಯವನ್ನು ಹಾಗೂ ಗೃಹ ಇಲಾಖೆಯಲ್ಲಿ ಪ್ರತ್ಯೇಕ ಸೆಲ್‌ನ್ನು ಸ್ಥಾಪಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

೦೨. **ಶ್ರೀ ರಮೇಶ್ ಬಾಬು** ಅವರು ರಾಜ್ಯದಲ್ಲಿ ಬಹುತೇಕ ಕೈಗಾರಿಕೆಗಳು ಹಾಗೂ ಕಂಪನಿಗಳು ತಮ್ಮ ಲಾಭಾಂಶದಲ್ಲಿ ಕಾರ್ಪೋರೇಟ್ ಸಾಮಾಜಿಕ ಹೊಣೆಗಾರಿಕೆ (ಸಿಎಸ್ಆರ್) ನಿಧಿಯನ್ನು ರಾಜ್ಯದ ಮೂಲಭೂತ ಸೌಕರ್ಯಗಳಿಗೆ ನೀಡದೆ ವಂಚಿಸುತ್ತಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು)

೦೩. **ಶ್ರೀಯುತರುಗಳಾದ ಪುಟ್ಟಣ್ಣ, ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್.), ಬಸನಗೌಡ ಬಾದರ್ಲಿ, ಬಲ್ಕೀಸ್ ಬಾನು ಹಾಗೂ ರಾಮೋಜಿಗೌಡ** ಅವರುಗಳು ದಿನಾಂಕ:15.10.2022 ರಂದು ಪೊಲೀಸ್ ಇನ್ಸ್‌ಪೆಕ್ಟರ್ (ಐ.ಎಸ್.ಡಿ) ಅವರನ್ನು ಅಮಾನತ್ತುಗೊಳಿಸಿ ಹೊರಡಿಸಲಾದ ಆದೇಶವನ್ನು ತೆರವುಗೊಳಿಸಿ ಸದರಿ ಅಧಿಕಾರಿಯನ್ನು ಸ್ಥಳ ನಿಯುಕ್ತಿಗೊಳಿಸುವಂತೆ ಕರ್ನಾಟಕ ಉಚ್ಚ ನ್ಯಾಯಾಲಯವು ಆದೇಶ ನೀಡಿದ್ದರೂ ಇದುವರೆವಿಗೂ ಕ್ರಮ ವಹಿಸದಿರುವ ಬಗ್ಗೆ ಪ್ರಸ್ತಾಪಿಸುವುದು. (ಮಾನ್ಯ ಗೃಹ ಸಚಿವರು)

೦೪. **ಡಾ: ತಳವಾರ್ ಸಾಬಣ್ಣ** ಅವರು ಗಡಿನಾಡು ಮತ್ತು ಹೊರನಾಡು ಕನ್ನಡಿಗರ ಹಿತಾಸಕ್ತಿ ಕಾಪಾಡಲು ಹಾಗೂ ಶಿಕ್ಷಣ ಮತ್ತು ಉದ್ಯೋಗ ಅವಕಾಶ ಒದಗಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಯೋಜನೆ ಮತ್ತು ಸಾಂಖ್ಯಿಕ ಸಚಿವರು)

೦೫. **ಶ್ರೀಯುತರುಗಳಾದ ಐವನ್ ಡಿ'ಸೋಜಾ, ಬಸನಗೌಡ ಬಾದರ್ಲಿ ಹಾಗೂ ಕೇಶವ ಪ್ರಸಾದ್ ಎಸ್** ಅವರುಗಳು ಕರಾವಳಿ ಕರ್ನಾಟಕ, ರಾಯಚೂರು ಜಿಲ್ಲೆ ಹಾಗೂ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಡ್ರಗ್ಸ್ ಸೇವನೆಗೆ ಯುವಕರು ಮತ್ತು ಮಕ್ಕಳು ತೊಡಗಿಸಿಕೊಂಡು ಇಸ್ಪೀಟು, ಮಟ್ಕದಂತಹ ಅಪರಾಧ ಕೃತ್ಯಗಳಲ್ಲಿ ಕೈಜೋಡಿಸುತ್ತಿರುವುದರಿಂದ ಯುವಜನತೆಯ ಮೇಲೆ ದುಷ್ಪರಿಣಾಮ ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು (ಮಾನ್ಯ ಗೃಹ ಸಚಿವರು)

೦೬. **ಶ್ರೀಯುತರುಗಳಾದ ಎಸ್.ವ್ಹಿ. ಸಂಕನೂರ, ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಎಸ್.ಎಲ್. ಭೋಜೇಗೌಡ ಹಾಗೂ ಶ್ರೀ ಚಿದಾನಂದ್ ಎಂ. ಗೌಡ** ಅವರುಗಳು ರಾಜ್ಯದಲ್ಲಿರುವ ಅನುದಾನಿತ ಸಂಯುಕ್ತ ಪದವಿ ಮಹಾವಿದ್ಯಾಲಯಗಳಿಂದ ಬೇರ್ಪಟ್ಟ ಪದವಿ ಪೂರ್ವ ಕಾಲೇಜುಗಳಲ್ಲಿ ಶೇ.50ಕ್ಕೂ ಹೆಚ್ಚು ಹುದ್ದೆಗಳು ಖಾಲಿ ಇರುವುದರಿಂದ ಶಿಕ್ಷಣ ಗುಣಮಟ್ಟ ಕಾಯ್ದುಕೊಳ್ಳಲು ತೊಂದರೆ ಉಂಟಾಗುತ್ತಿರುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಸಚಿವರು)

೦೭. **ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಶ್ರೀ ಎನ್. ರವಿಕುಮಾರ್** ಅವರು ಭೋವಿ ಜಾತಿಗೆ ಪರಿಶಿಷ್ಠ ಜಾತಿಯ ಪ್ರಮಾಣ ಪತ್ರವನ್ನು ನೀಡಲು ಸಹಕಾರಿಯಾಗುವ ನಿಟ್ಟಿನಲ್ಲಿ ಶ್ರೀ ವಿ.ಎಸ್. ಉಗ್ರಪ್ಪನವರು ನೀಡಿರುವ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಸಮಾಜ ಕಲ್ಯಾಣ ಸಚಿವರು)

೦೮. **ಶ್ರೀ ಕೆ.ಎಸ್. ನವೀನ್** ಅವರು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿ ಬರುವ ಸರ್ಕಾರಿ ವಿದ್ಯಾರ್ಥಿ ವಸತಿ ನಿಲಯಗಳ ಸಂಖ್ಯೆಯನ್ನು ಹೆಚ್ಚಿಸುವ ಕುರಿತು ಪ್ರಸ್ತಾಪಿಸುವುದು. (ಮಾನ್ಯ ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು)

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**